# ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ

ಮುಕ್ತಗಂಗೋತ್ರಿ, ಮೈಸೂರು – 570 006

ಸಂಖ್ಯೆ:ಕರಾಮುವಿ/ಪವಿ/5.1/ಡಿಪ್ಲೋಮಾ.ಪ/139/2020-21. ದಿನಾಂಕ:-21-11-2020

## ಅಧಿಸೂಚನೆ

**ವಿಷಯ:-** 2019-20ನೇ ಶೈಕ್ಷಣಿಕ ಸಾಲಿನಲ್ಲಿ (ಜುಲೈ ಮತ್ತು ಜನವರಿ ಆವೃತ್ತಿ)ಪ್ರವೇಶಾತಿ ಪಡೆದಿರುವ ಪಿ.ಜಿ. ಡಿಪ್ಲೋಮಾ, ಡಿಪ್ಲೋಮಾ ಮತ್ತು ಸರ್ಟಿಫಿಕೇಟ್ ಕೋರ್ಸ್‌ಗಳ ವಿದ್ಯಾರ್ಥಿಗಳಿಗೆ ಪರೀಕ್ಷಾ ಶುಲ್ಕ ಪಾವತಿಸುವ ಬಗೆಗೆ.

**ಉಲ್ಲೇಖ:-** ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ: 14-11-2020.

*****

ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದಲ್ಲಿ 2019-20ನೇ ಶೈಕ್ಷಣಿಕ ಸಾಲಿನಲ್ಲಿ (ಜುಲೈ ಮತ್ತು ಜನವರಿ ಆವೃತ್ತಿ)ಪ್ರವೇಶಾತಿ ಪಡೆದಿರುವ ಪಿ.ಜಿ. ಡಿಪ್ಲೋಮಾ, ಡಿಪ್ಲೋಮಾ ಮತ್ತು ಸರ್ಟಿಫಿಕೇಟ್ ಕೋರ್ಸ್‌ಗಳ ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕ ಪಾವತಿಸಲು ತಿಳಿಸಲಾಗಿದೆ.

ಸದರಿ ವಿದ್ಯಾರ್ಥಿಗಳಿಗೆ ಮುಂದಿನ ದಿನಗಳಲ್ಲಿ ಪರೀಕ್ಷೆಗಳನ್ನು ನಿಗದಿಪಡಿಸಲಾಗಿದ್ದು, ಈ ಸಂಬಂಧ ಪರೀಕ್ಷಾ ಶುಲ್ಕ ಪಾವತಿಸುವ ದಿನಾಂಕಗಳು ಮತ್ತು ಪಾವತಿಸಬೇಕಾಗಿರುವ ಶುಲ್ಕದ ವಿವರಗಳು ಈ ಕೆಳಕಂಡಂತಿದ್ದು, ವಿದ್ಯಾರ್ಥಿಗಳು ವಿಶ್ವವಿದ್ಯಾನಿಲಯದ ಅಧಿಕೃತ ವೆಬ್‌ಸೈಟ್ www.ksoumysuru.ac.inನಲ್ಲಿ ಪರೀಕ್ಷಾ ಅರ್ಜಿ ಮತ್ತು ಪರೀಕ್ಷಾ ಶುಲ್ಕವನ್ನು ಎಲ್ಲಾ ಅಗತ್ಯ ವಿವರಗಳೊಂದಿಗೆ ಭರ್ತಿಮಾಡಿ ಕಡ್ಡಾಯವಾಗಿ ಅಂತರ್ಜಾಲದ **(Online)** ಮೂಲಕವೇ ಸಲ್ಲಿಸುವುದು. ವೆಬ್‌ಸೈಟ್‌ನಲ್ಲಿ ಅರ್ಜಿ ಸಲ್ಲಿಸುವಾಗ ತೊಂದರೆಗಳು ಎದುರಾದಲ್ಲಿ ಆನ್‌ಲೈನ್ ಸಹಾಯವಾಣಿ ಸಂಖ್ಯೆ **8800335638** ಯನ್ನು ಸಂಪರ್ಕಿಸುವುದು.

| | |
|---|---|
| ಪರೀಕ್ಷಾ ಶುಲ್ಕ ಪಾವತಿಸುವ ಪ್ರಾರಂಭದ ದಿನಾಂಕ: | 23-11-2020 |
| ದಂಡ ಶುಲ್ಕವಿಲ್ಲದೆ ಪಾವತಿಗೆ ಕಡೆ ದಿನಾಂಕ: | 08-12-2020 |
| ರೂ.200/-ದಂಡ ಶುಲ್ಕದೊಂದಿಗೆ ಪಾವತಿಗೆ ಕಡೆ ದಿನಾಂಕ: | 16-12-2020 |

1. **ಮೈಸೂರು ಪರೀಕ್ಷಾ ಕೇಂದ್ರದಲ್ಲಿ ಮಾತ್ರ ಪರೀಕ್ಷೆಯನ್ನು ನಡೆಸಲು ನಿಗಧಿಪಡಿಸಿದೆ.**

**ವಿದ್ಯಾರ್ಥಿಗಳು ಪಾವತಿಸಬೇಕಾಗಿರುವ ಪರೀಕ್ಷಾ ಶುಲ್ಕಗಳ ಕೋಷ್ಟಕ**

| ಕ್ರಮ ಸಂಖ್ಯೆ | ಪದವಿಗಳು | ಪೂರ್ಣಪರೀಕ್ಷೆಗೆ ರೂ.ಗಳಲ್ಲಿ |
|---|---|---|
| 01 | Post Graduate Diploma in English (PGDE) | 850/- |
| 02 | Post Graduate Diploma in Communicative English (PGDCE) | 850/- |
| 03 | Post-Graduate Diploma in Marketing Management (PGDMM) | 850/- |
| 04 | Post-Graduate Diploma in Financial Management (PGDFM) | 850/- |
| 05 | Post-Graduate Diploma in Nutrition and Dietetics (PGDND) | 850/- |
| 06 | Post-Graduate Diploma in Human Resource Management (PGDHRM) | 850/- |
| 07 | Post-Graduate Diploma in Business Administration (PGDBA) | 850/- |
| 08 | Post-Graduate Diploma in Mass Communication and Journalism (PGDMCJ) | 850/- |
| 09 | Post-Graduate Diploma in Ambedkar Studies (PGDAS) | 850/- |
| 10 | Post-Graduate Diploma in Business Law (PGDBL) | 850/- |
| 11 | Post-Graduate Diploma in Kuvempu Sahitya (PGDKS) | 850/- |
| 12 | P.G. Diploma in Information Science (PGDIS) | 850/- |
| 13 | P.G. Diploma in Computer Application (PGDCA) | 850/- |
| 14 | Diploma in Journalism (DIJ) | 850/- |
| 15 | Post PUC Diploma in Kannada (DIK) | 850/- |
| 16 | Diploma in Nutrition and Health Education (DNHE) | 850/- |
| 17 | Diploma in Computer Application(DCA) | 850/- |
| 18 | Diploma in Information Science (DIS) | 850/- |
| 19 | Certificate Course in Panchayath Raj System (CPR) | 700/- |
| 20 | Certificate in Kannada (CK) | 700/- |
| 21 | Certificate in Nutrition and Food (CNF) | 700/- |

## ಸೂಚನೆಗಳು

1. ಕೇಂದ್ರ/ರಾಜ್ಯ ಸರ್ಕಾರವು ಆಗಿಂದ್ದಾಗೆ ಹೊರಡಿಸುವ ಕೋವಿಡ್-19 ನಿರ್ವಹಣೆಯ ನಿಯಮಗಳನ್ನು ಹಾಗೂ ಮಾರ್ಗಸೂಚಿಗಳನ್ನು ಕಡ್ಡಾಯವಾಗಿ ಪಾಲಿಸಬೇಕು.

2. ಅಂತರ್ಜಾಲ (**Online**)ದಲ್ಲಿ ಪರೀಕ್ಷಾ ಅರ್ಜಿ ಭರ್ತಿ ಮಾಡಿ ಶುಲ್ಕ ಪಾವತಿಸಿದ ನಂತರ ಬರುವ ವಿವರದ ಪ್ರತಿಯನ್ನು ಕುಲಸಚಿವರು(ಪರೀಕ್ಷಾಂಗ) ಕರಾಮುವಿ, ಮುಕ್ತ ಗಂಗೋತ್ರಿ, ಮೈಸೂರು-06 ಇಲ್ಲಿಗೆ ಕಡ್ಡಾಯವಾಗಿ ಖುದ್ದಾಗಿ ಅಥವಾ ಅಂಚೆಯ ಮೂಲಕ ಕಳುಹಿಸತಕ್ಕದ್ದು.

3. ವಿಶ್ವವಿದ್ಯಾನಿಲಯವು ನೀಡಿರುವ ಗುರುತಿನ ಚೀಟಿಯನ್ನು ಕಡ್ಡಾಯವಾಗಿ ಪರೀಕ್ಷೆಗೆ ತರುವುದು.

4. ವಿದ್ಯಾರ್ಥಿಯು ಆನ್‌ಲೈನ್ ಮೂಲಕ ಶುಲ್ಕ ಪಾವತಿಸಿ ಸಲ್ಲಿಸಿದ ಅರ್ಜಿಯ ಒಂದು ಪ್ರತಿಯನ್ನು ಹೊಂದಿರತಕ್ಕದ್ದು.

5. ವಿವಿ ನಿಲಯಕ್ಕೆ ನೇರವಾಗಿ / ಅಂಚೆ ಮೂಲಕ ಪರೀಕ್ಷಾ ಅರ್ಜಿಗಳನ್ನು ಸಲ್ಲಿಸಲು ಅವಕಾಶವಿರುವುದಿಲ್ಲ.

6. ಪರೀಕ್ಷಾ ಶುಲ್ಕವನ್ನು ಯಾವ ಕಾರಣದಿಂದಲೂ ಮರುಪಾವತಿ ಮಾಡಲಾಗುವುದಿಲ್ಲ ಹಾಗೂ ಅದನ್ನು ಮುಂದಿನ ಪರೀಕ್ಷೆಗೆ ಮರುಹೊಂದಾಣಿಕೆ ಮಾಡಿಕೊಳ್ಳಲಾಗುವುದಿಲ್ಲ.

7. ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳ ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕ ವಿನಾಯಿತಿ ಸೌಲಭ್ಯ ಪಡೆಯಲು ತಾವು ಪ್ರವೇಶಾತಿ ಪಡೆದ ಸಾಲಿನಲ್ಲಿಯೇ ಕಡ್ಡಾಯವಾಗಿ ಪರೀಕ್ಷೆ ಬರೆದು ತೇರ್ಗಡೆಯಾಗಿರಬೇಕು. ಪ್ರವೇಶ ಪಡೆದ ಸಾಲಿನಲ್ಲಿಯೇ ಹಾಗೂ ವ್ಯಾಸಂಗಾವಧಿಯಲ್ಲಿಯೇ ಪರೀಕ್ಷೆ ಬರೆಯದೇ ನಂತರದ ಪ್ರಯತ್ನದಲ್ಲಿ ಬರೆದಲ್ಲಿ, ಪರೀಕ್ಷಾ ಶುಲ್ಕ ವಿನಾಯಿತಿ ಅರ್ಹತೆ ಇರುವುದಿಲ್ಲ.

8. 2019-20ನೇ ಸಾಲಿನ (ಜುಲೈ ಮತ್ತು ಜನವರಿ ಆವೃತ್ತಿ) ಪಿ.ಜಿ. ಡಿಪ್ಲೋಮಾ, ಡಿಪ್ಲೋಮಾ ಮತ್ತು ಸರ್ಟಿಫಿಕೇಟ್ ಕೋರ್ಸ್‌ಗಳಿಗೆ ಶುಲ್ಕ ವಿನಾಯಿತಿಯಿಂದ ಪ್ರವೇಶಾತಿ ಪಡೆದ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಕ್ಕೆ ಸೇರಿದ ವಿದ್ಯಾರ್ಥಿಗಳು ಪರೀಕ್ಷಾ ಸೇವಾ ಶುಲ್ಕವಾಗಿ ರೂ. 50/-(ಐವತ್ತು ರೂಪಾಯಿಗಳು ಮಾತ್ರ)ಗಳನ್ನು ಕಡ್ಡಾಯವಾಗಿ ಪಾವತಿಸುವುದು. ತಪ್ಪಿದಲ್ಲಿ, ಅಂತಹವರ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

9. 2019-20ನೇ ಸಾಲಿನ (ಜುಲೈ ಮತ್ತು ಜನವರಿ ಆವೃತ್ತಿ) ಪಿ.ಜಿ. ಡಿಪ್ಲೋಮಾ, ಡಿಪ್ಲೋಮಾ ಮತ್ತು ಸರ್ಟಿಫಿಕೇಟ್ ಕೋರ್ಸ್‌ಗಳಿಗೆ ಶುಲ್ಕ ವಿನಾಯಿತಿ ಪಡೆಯದೇ ಪ್ರವೇಶಾತಿ ಪಡೆದ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಕ್ಕೆ ಸೇರಿದ ವಿದ್ಯಾರ್ಥಿಗಳು ಕಡ್ಡಾಯವಾಗಿ ಪೂರ್ಣ ಪರೀಕ್ಷಾ ಶುಲ್ಕವನ್ನು ಪಾವತಿಸತಕ್ಕದ್ದು.

10. ವಿದ್ಯಾರ್ಥಿಗಳು ಚಾಲ್ತಿಯಲ್ಲಿರುವ ಪಠ್ಯಕ್ರಮ ಹಾಗೂ ಪರೀಕ್ಷಾ ಯೋಜನೆಗೆ ಅನುಗುಣವಾಗಿ ಪರೀಕ್ಷೆ ತೆಗೆದುಕೊಳ್ಳಬೇಕು.

11. ವಿದ್ಯಾರ್ಥಿಗಳು ತಮ್ಮ ಪಿ.ಜಿ. ಡಿಪ್ಲೋಮಾ, ಡಿಪ್ಲೋಮಾ ಮತ್ತು ಸರ್ಟಿಫಿಕೇಟ್ ಕೋರ್ಸ್‌ಗಳ ವಿಷಯಕ್ಕೆ ಸಂಬಂಧಿಸಿದಂತೆ ಪರೀಕ್ಷಾ ಪ್ರವೇಶಾತಿ ಪತ್ರಗಳನ್ನು ಪರೀಕ್ಷೆಗಳು ಪ್ರಾರಂಭವಾಗುವ ಎರಡು ದಿನಗಳ ಮುಂಚೆ ವಿ.ವಿ. ನಿಲಯದ ಅಂತರ್ಜಾಲ www.ksoumysuru.ac.in ನಿಂದ ಪಡೆಯಬಹುದಾಗಿದೆ.

12. ಪರೀಕ್ಷಾ ಕೇಂದ್ರಗಳಿಗೆ ಮೊಬೈಲ್ ಫೋನ್ ತರುವುದನ್ನು ಕಡ್ಡಾಯವಾಗಿ ನಿಷೇಧಿಸಲಾಗಿದೆ. ಮೊಬೈಲ್ ಫೋನ್ ಪರೀಕ್ಷಾ ಕೇಂದ್ರಗಳಿಗೆ ತರುವುದು ದುರ್ನಡತೆ (**Malpractice**) ಯಾಗುತ್ತದೆ. ಅಂತಹ ವಿದ್ಯಾರ್ಥಿಗಳ ವಿರುದ್ಧ ನಿಯಮಾನುಸಾರ ಕ್ರಮ ಜರುಗಿಸಲಾಗುತ್ತದೆ.

13. ಪ್ರಾಯೋಗಿಕ ಪರೀಕ್ಷೆಯ ಮತ್ತು ಮೌಖಿಕ ಪರೀಕ್ಷೆಯ ಬಗೆಗೆ ಸಂಬಂಧಿಸಿದ ವಿಭಾಗದ ಮುಖ್ಯಸ್ಥರನ್ನು ಸಂಪರ್ಕಿಸುವುದು.

21/11/2020

ಕುಲಸಚಿವರು(ಪರೀಕ್ಷಾಂಗ)

ಪ್ರತಿ:

1. ಮಾನ್ಯ ಕುಲಪತಿಗಳ ವಿಶೇಷ ಕರ್ತವ್ಯ ಅಧಿಕಾರಿಗಳು ಕರಾಮುವಿ, ಮೈಸೂರು.
2. ಮಾನ್ಯ ಕುಲಸಚಿವರ ಆಪ್ತಸಹಾಯಕರು, ಕರಾಮುವಿ, ಮೈಸೂರು.
3. ಹಣಕಾಸು ಅಧಿಕಾರಿಗಳು, ಕರಾಮುವಿ, ಮೈಸೂರು.
4. ಡೀನ್(ಶೈಕ್ಷಣಿಕ),ಕರಾಮುವಿ,ಮೈಸೂರು.
5. ಡೀನ್(ಅಧ್ಯಯನ ಕೇಂದ್ರ), ಕರಾಮುವಿ, ಮೈಸೂರು.
6. ಮುಖ್ಯಸ್ಥರು ಎಲ್ಲಾ ಅಧ್ಯಯನ ವಿಭಾಗಗಳು, ಕರಾಮುವಿ, ಮೈಸೂರು.
7. ಎಲ್ಲಾ ಪ್ರಾದೇಶಿಕ ನಿರ್ದೇಶಕರುಗಳು, ಕರಾಮುವಿ ಪ್ರಾದೇಶಿಕ ಕೇಂದ್ರಗಳು, ಕರಾಮುವಿ.
8. ನೋಡೆಲ್ ಅಧಿಕಾರಿಗಳು, ವೆಬ್‌ಸೈಟ್ ನಿರ್ವಹಣೆ, ಕರಾಮುವಿ. ವಿಶ್ವವಿದ್ಯಾನಿಲಯದ ಅಂತರ್‌ಜಾಲದಲ್ಲಿ ಪ್ರಕಟಿಸುವಂತೆ ಕ್ರಮವಹಿಸುವುದು.
9. ಉಪಕುಲಸಚಿವ/ಸಹಾಯಕ ಕುಲಸಚಿವರು/ಅಧೀಕ್ಷಕರು, ಕರಾಮುವಿ, ಮೈಸೂರು.
10. ಕಛೇರಿ ಪ್ರತಿ/ಸಂಬಂಧಿಸಿದ ಕಡತಕ್ಕೆ.